ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಸಹಕಾರಿ ವ್ಯಾಜ್ಯಗಳ ಬಗ್ಗೆ ಮಾಹಿತಿ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

933(1116) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಾಯಕ ನಿಬಂಧಕರು, ಉಪ ನಿಬಂಧಕರು, ಜಂಟಿ ನಿಬಂಧಕರು, ಹೆಚ್ಚುವರಿ ನಿಬಂಧಕರು ಹಾಗೂ ನಿಬಂಧಕರ ಬಳಿ ಇರುವ ಸಹಕಾರಿ ವ್ಯಾಜ್ಯಗಳ ಪ್ರಕರಣಗಳ ಸಂಖ್ಯೆ ಎಷ್ಟು; (ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಸದರಿ ಪ್ರಕರಣಗಳನ್ನು ಇತ್ಯರ್ಥ ಮಾಡುವಲ್ಲಿನ ವಿಳಂಬಕ್ಕೆ ಕಾರಣಗಳೇನು ;

(ಇ) ಈ ಅಧಿಕಾರಿಗಳಿಂದ ನಿಗದಿತ ಸಮಯದಲ್ಲಿ ಕಾನೂನಿಗೆ ಪೂರಕವಾದ ತೀರ್ಪುಗಳು ಬಾರದೆ ಇರುವುದರಿಂದ ಕೆಲವು ಸಂಘ ಸಂಸ್ಥೆಗಳ ಸದಸ್ಯರಿಗೆ ತುಂಬಾ ತೊಂದರೆಗಳುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿಳಂಬ ನೀತಿ ತಪ್ಪಿಸಲು ಮತ್ತು ಮನಬಂದಂತೆ ತೀರ್ಪು ನೀಡುತ್ತಿರುವ ಅಧಿಕಾರಿಗಳ ಮೇಲೆ ಇದುವರೆವಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಸದರಿ ಅಧಿಕಾರಿಗಳಿಗೆ ತೀರ್ಪು ನೀಡುವ ಅಧಿಕಾರವನ್ನು ತೆಗೆದು ಹಾಕಿ ; ಸಹಕಾರಿ ನ್ಯಾಯಾಲಯಗಳನ್ನು ಪ್ರಾರಂಭಿಸಲು ಸರ್ಕಾರ ಚಿಂತಿಸುವುದೇ?